ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18 ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12**

email id:commissioner.pue.@.gmail.com phone number:080-23361856 /fax-080-23361852

ಸಂಖ್ಯೆ: ಪಿಯು-01/3026/ಸಿಬ್ಬಂದಿ/ಸಿಆರ್-04/ಎನ್‌ಓಸಿ/2016-17 ದಿನಾಂಕ:31/12/2016

**ಜ್ಞಾಪನ**

**ವಿಷಯ:** ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿಗಳಿಗೆ ಹುದ್ದೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವ ಕುರಿತು

**ಉಲ್ಲೇಖ:** ಜಿಲ್ಲಾ ಉಪ ನಿರ್ದೇಶಕರಿಂದ ಬಂದಿರುವ ಪ್ರಸ್ತಾವನೆಗಳು.

***

ಈ ಕೆಳಕಂಡ ಬೋಧಕೇತರ ಸಿಬ್ಬಂದಿಗಳಿಗೆ ಕೆ.ಪಿ.ಎಸ್.ಸಿ.ಯಿಂದ ವಿವಿಧ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವಂತೆ ಉಪ ನಿರ್ದೇಶಕರು ಉಲ್ಲೇಖಿತ ಪತ್ರದಂತೆ ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಈ ಕೆಳಕಂಡ ಬೋಧಕೇತರ ಸಿಬ್ಬಂದಿಗಳ ಹೆಸರಿನ ಮುಂದೆ ತೋರಿಸಿರುವ ಪರೀಕ್ಷೆಗೆ ಅರ್ಜಿಸಲ್ಲಿಸಲು ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮತಿ ನೀಡಿದೆ.

| ಕ್ರ ಸಂ | ಹೆಸರು ಮತ್ತು ವಿಳಾಸ : ಶ್ರೀ/ಶ್ರೀಮತಿ | ಪರೀಕ್ಷೆಯ ಹೆಸರು |
|---|---|---|
| 1 | ಶ್ರೀ ಎಸ್.ಎಸ್. ಶಿರಗಾವಿ,<br>ಪ್ರಥಮ ದರ್ಜೆ ಸಹಾಯಕರು,<br>ಸರ್ಕಾರಿ ಸರದಾರ್ಸ ಪದವಿ ಪೂರ್ವ ಕಾಲೇಜು, ಬೆಳಗಾವಿ ತಾ॥ | ಪ್ರಥಮ ದರ್ಜೆ ಸಹಾಯಕರು ಮತ್ತು ಆಹಾರ ಮತ್ತು ನಾಗರೀಕ ಸರಬರಾಜು ನಿಗಮದಲ್ಲಿನ ಹಿರಿಯ ಸಹಾಯಕರ ಹುದ್ದೆ |
| 2 | ಶ್ರೀ ಶಿವಲಿಂಗಪ್ಪ ಎಸ್. ನ್ಯಾಮಗೌಡ,<br>ದ್ವಿತೀಯ ದರ್ಜೆ ಸಹಾಯಕರು,<br>ಬಾಲಕರ ಸರಕಾರಿ ಪ.ಭಾ ಪದವಿ ಪೂರ್ವ ಕಾಲೇಜು,<br>ಜಮಖಂಡಿ-587 301 | ಪ್ರಥಮ ದರ್ಜೆ ಸಹಾಯಕರು |

1. ಸದರಿ ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು. ಸದರಿಯವರ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
2. ಕಛೇರಿ ಕೆಲಸ ಕಾರ್ಯಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ ಸದರಿ ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.
3. ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ. ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿಬರುವಂತಿಲ್ಲ.
4. ಸದರಿಯವರು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ ಈಗ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯುವುದು.

ಜಂಟಿ ನಿರ್ದೇಶಕರು (ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳು:**

1. ಜಿಲ್ಲಾ ಉಪ ನಿರ್ದೇಶಕರು, ಬೆಳಗಾವಿ ಜಿಲ್ಲೆ ಇವರ ಮಾಹಿತಿಗಾಗಿ.
2. ಜಿಲ್ಲಾ ಉಪ ನಿರ್ದೇಶಕರು, ಬಾಗಲಕೋಟೆ ಜಿಲ್ಲೆ ಇವರ ಮಾಹಿತಿಗಾಗಿ.
3. ಸಂಬಂಧಿಸಿದ ಬೋಧಕೇತರ ಸಿಬ್ಬಂದಿಗಳಿಗೆ ಪ್ರಾಂಶುಪಾಲರ ಮುಖಾಂತರ.
4. ಸಹಾಯಕ ನಿರ್ದೇಶಕರು, ಇ-ಆಡಳಿತ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು
5. ಜ್ಞಾಪನ ಕಡತ.